ಶ್ರೀ ಪ್ರಭಾಕರ್ ಎಸ್. ರಾಣೆ (ವಯಸ್ಕರ ಶಿಕ್ಷಣ ಸಚಿವರು):–

ಅ) ರಾಜ್ಯದಲ್ಲಿ ಸಂಪೂರ್ಣ ಸಾಕ್ಷರತಾ ಆಂದೋಲನವು ವಿವಿಧ ಹಂತಗಳಲ್ಲಿ ಅನುಷ್ಠಾನದಲ್ಲಿದೆ. ಪ್ರಸ್ತುತ 9 ಜಿಲ್ಲೆಗಳಲ್ಲಿ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ.

ಆ) ಒಂದು (ದಕ್ಷಿಣ ಕನ್ನಡ)

ಇ) ಸಂಪೂರ್ಣ ಸಾಕ್ಷರತಾ ಆಂದೋಲನದ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಮುಂದಿನ 2 ವರ್ಷಗಳೊಳಗಾಗಿ ಕೈಗೊಳ್ಳಲು ಉದ್ದೇಶಿಸಲಾಗಿದೆ. ನಿಗಧಿತ ಸೂತ್ರದಂತೆ ಜಿಲ್ಲೆಯನ್ನು ಸಂಪೂರ್ಣ ಸಾಕ್ಷರ ಜಿಲ್ಲೆಯೆಂದು ಘೋಷಿಸುವ ಮೊದಲು ಆ ಜಿಲ್ಲೆಯಲ್ಲಿನ ಅನಕ್ಷರಸ್ಥರ ಪೈಕಿ ಶೇಕಡ 80–85 ರಷ್ಟು ಜನರಾದರೂ ಅಕ್ಷರಸ್ಥರಾಗಬೇಕು. ಜಿಲ್ಲೆಗಳು ಈ ಹಂತದ ಸಾಕ್ಷರತೆಯನ್ನು ಸಾಧಿಸಿದ ನಂತರ ಸಂಪೂರ್ಣ ಸಾಕ್ಷರತೆ ಹೊಂದಿರುವುದಾಗಿ ಘೋಷಿಸಲಾಗುವುದು.

ರಾಜ್ಯದಲ್ಲಿ ಆರೋಗ್ಯ ವಿಶ್ವವಿದ್ಯಾಲಯ ಪ್ರಾರಂಭ

288 (1054) ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ):-

ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಆರೋಗ್ಯ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಉದ್ದೇಶವು ಸರ್ಕಾರಕ್ಕಿದೆಯೇ ?

ಆ) ಹಾಗಿದ್ದಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು ?

ಇ) ಯಾವ ಜಿಲ್ಲೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ ?

ಶ್ರೀ ಜಿ. ರಾಮಕೃಷ್ಣ (ವೈದ್ಯಕೀಯ ಶಿಕ್ಷಣ ಸಚಿವರು):–

ಅ) ಹೌದು

ಆ) ಇನ್ನೂ ತೀರ್ಮಾನ ತೆಗೆದುಕೊಂಡಿಲ್ಲ.

ಇ) ಡಾ।। ಹೆಚ್. ನರಸಿಂಹಯ್ಯ ಸಮಿತಿಯ ಭಾಗ – 2 ರಲ್ಲಿ ಸಲ್ಲಿಸಿರುವ ವರದಿಯಂತೆ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯವನ್ನು ಬೆಂಗಳೂರಿನಲ್ಲಿ ಸ್ಥಾಪಿಸಲು ಸಲಹೆ ನೀಡಿದ್ದು, ಸದರಿ ಸಲಹೆಯನ್ನು ಪರಿಶೀಲಿಸಲಾಗುತ್ತಿದೆ.

ಖಾಸಗಿ ಗ್ರಂಥಪಾಲಕರಿಗೂ ಸರ್ಕಾರಿ ಗ್ರಂಥಪಾಲಕರಿಗೂ ವೇತನ ತಾರತಮ್ಯ

290 (906) ಹೆಚ್.ಎಂ. ರೇವಣ್ಣ (ಮಾಗಡಿ):-

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಖಾಸಗಿ ಅಂಗೀಕೃತ ಪ್ರೌಢಶಾಲಾ ಗ್ರಂಥಪಾಲಕರಿಗೂ ಕಿರಿಯ ಕಾಲೇಜು ಮತ್ತು ಸರ್ಕಾರಿ ಗ್ರಂಥಪಾಲಕರಿಗೂ ವೇತನ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ವೇತನ ತಾರತಮ್ಯವನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಇ) ಹಾಗಿಲ್ಲದಿದ್ದಲ್ಲಿ ಕ್ರಮ ಕೈಗೊಳ್ಳುವುದು ಯಾವಾಗ ?

ಡಾ।। ಹೆಗ್ಗಪ್ಪ ಡಿ. ಲಮಾಣಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):–